# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | 2288 (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ವರ್ಗಾಯಿತ) |
| **ಸದಸ್ಯರ ಹೆಸರು** | ಶ್ರೀ ಪಿ.ಆರ್. ರಮೇಶ್<br>(ನಾಮ ನಿರ್ದೇಶನ ಹೊಂದಿರುವವರು) |
| **ಉತ್ತರಿಸಬೇಕಾದ ದಿನಾಂಕ** | 26-03-2021 |
| **ಉತ್ತರಿಸುವ ಸಚಿವರು** | ಕಂದಾಯ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಸ್ವಮಿತ್ವ (Svamitva) ಯೋಜನೆಯನ್ನು ಪ್ರಾರಂಭಿಸಲಾಗಿದೆಯೇ; ಪ್ರಾರಂಭಿಸಿದ್ದಲ್ಲಿ, ಅದರ ಮಾಹಿತಿ ನೀಡುವುದು; | "ಸ್ವಮಿತ್ವ" ಯೋಜನೆಯನ್ನು ದಿನಾಂಕ: 24-04-2020 ರಂದು ಸನ್ಮಾನ್ಯ ಪ್ರಧಾನ ಮಂತ್ರಿಗಳು ಉದ್ಘಾಟಿಸಿರುತ್ತಾರೆ. ಈ ಯೋಜನೆಯನ್ನು ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಮಂತ್ರಾಲಯ, ರಾಜ್ಯ ಸರ್ಕಾರದ ಕಂದಾಯ ಇಲಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಹಾಗೂ ಭಾರತೀಯ ಸರ್ವೇಕ್ಷಣಾ ಸಂಸ್ಥೆಯ ಸಹಯೋಗದೊಂದಿಗೆ ಅನುಷ್ಠಾನಗೊಳಿಸಲಾಗುತ್ತಿದೆ. ಪ್ರಥಮ ಹಂತದಲ್ಲಿ ರಾಜ್ಯದ 16 ಜಿಲ್ಲೆಗಳಲ್ಲಿ (ರಾಮನಗರ, ಹಾಸನ, ತುಮಕೂರು, ಬೆಳಗಾಂ, ಉತ್ತರಕನ್ನಡ, ಕೊಡಗು, ದಕ್ಷಿಣಕನ್ನಡ, ಮೈಸೂರು, ವಿಜಯಪುರ, ಕಲ್ಬುರ್ಗಿ, ದಾವಣಗೆರೆ, ಧಾರವಾಡ, ಗದಗ, ರಾಯಚೂರು, ಯಾದಗಿರಿ ಮತ್ತು ಕೊಪ್ಪಳ) ಸ್ವಮಿತ್ವ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ. |
| ಆ) | ಸದರಿ ಯೋಜನೆಯ ಲಾಭ ಪಡೆಯಲು ಸಾರ್ವಜನಿಕರು ಹಣವನ್ನು ಸಂದಾಯ ಮಾಡಬೇಕಾಗಿದೆಯೇ;(ಮಾಹಿತಿ ನೀಡುವುದು) | ಸ್ವಮಿತ್ವ ಯೋಜನೆಯಡಿಯಲ್ಲಿ ಗ್ರಾಮೀಣ ಜನವಸತಿ ಪ್ರದೇಶವನ್ನು ಡ್ರೋನ್ ತಂತ್ರಜ್ಞಾನ ಬಳಸಿ ಸರ್ವೆ ಕಾರ್ಯಕೈಗೊಳ್ಳುವ ಮೂಲಕ ಗ್ರಾಮವಾಸಿಗಳಿಗೆ ಅವರ ವಾಸಸ್ಥಳದ ಆಸ್ತಿಗಳಿಗೆ ಪ್ರಾಪರ್ಟಿ ಕಾರ್ಡ್ (ಹಕ್ಕುದಾಖಲೆ)ಗಳನ್ನು ಯಾವುದೇ ಶುಲ್ಕವಿಲ್ಲದೇ ವಿತರಿಸುವ ಉದ್ದೇಶ ಹೊಂದಲಾಗಿದೆ. |
| ಇ) | ಸದರಿ ಯೋಜನೆಯನ್ನು ರಾಜ್ಯಾದಾದ್ಯಂತ ಯಾವ ಕಾಲಮಿತಿಯಲ್ಲಿ ಅಳವಡಿಸಿ ಕೊಳ್ಳಲಾಗುವುದು? (ವಿವರ ನೀಡುವುದು) | 2020-21ನೇ ಸಾಲಿನಲ್ಲಿ ಕೇಂದ್ರ ಸರ್ಕಾರದಿಂದ ಗ್ರಾಮ ಪಂಚಾಯತಿವಾರು ಒಟ್ಟು 1950 ಗ್ರಾಮಗಳಲ್ಲಿ ಈ ಯೋಜನೆಯನ್ನು ಅನುಷ್ಠಾನಗೊಳಿಸಲು ಗುರಿ ನಿಗಧಿಪಡಿಸಲಾಗಿತ್ತು. ಹಾಲಿ ಆಯ್ದ 16 ಜಿಲ್ಲೆಗಳಲ್ಲಿ ಸುಮಾರು 2,000 ಜನವಸತಿ ಪ್ರದೇಶಗಳಿಗೆ ಡ್ರೋಣ್ ಸರ್ವೆ ಕಾರ್ಯ ಕೈಗೊಳ್ಳುವ ಮೂಲಕ ಯೋಜನೆಯನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಲಾಗುತ್ತಿದ್ದು, ಆರ್ಥಿಕ, ಮಾನವ ಮತ್ತು ಇತರೆ ಸಂಪನ್ಮೂಲಗಳ ಲಭ್ಯತೆಗೆ ಅನುಗುಣವಾಗಿ ಮುಂಬರುವ ದಿನಗಳಲ್ಲಿ ಈ ಯೋಜನೆಯನ್ನು ರಾಜ್ಯಾದ್ಯಂತ ವಿಸ್ತರಿಸುವ ಕುರಿತು ಕ್ರಮ ಕೈಗೊಳ್ಳಲಾಗುತ್ತದೆ. |

**ಸಂಖ್ಯೆ: ಕಂಇ 73 ಎಸ್‌ಎಸ್‌ಸಿ 2021**

**(ಆರ್. ಅಶೋಕ)**
ಕಂದಾಯ ಸಚಿವರು